## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 870 |
| ಮಾನ್ಯ ಸದಸ್ಯರ ಹೆಸರು | ಶ್ರೀ ಮುನಿರಾಜು ಗೌಡ ಪಿ.ಎಂ |
| ಉತ್ತರಿಸುವ ದಿನಾಂಕ | 26/12/2022 |
| ಉತ್ತರಿಸುವ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ನರ್ಸಿಂಗ್ ಕಾಲೇಜುಗಳ ಪರೀಕ್ಷಾ ಅಕ್ರಮದ ಕುರಿತು ಮಾಧ್ಯಮಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು; | ರಾಜ್ಯದ ನರ್ಸಿಂಗ್ ಶಾಲೆಗಳ ಪರೀಕ್ಷಾ ಅಕ್ರಮದ ಕುರಿತು ಮಾಧ್ಯಮಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.<br><br>ಈ ಬಗ್ಗೆ ವಿಶೇಷಾಧಿಕಾರಿಗಳು, ಕರ್ನಾಟಕ ಶುಶ್ರೂಷಾ ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ, ಬೆಂಗಳೂರು ರವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ದಿನಾಂಕ: 22/11/2022 ರಿಂದ 25/11/2022 ರ ವರೆಗೆ ನಡೆದ ಜಿ.ಎನ್.ಎಂ ಪರೀಕ್ಷೆಗಳನ್ನು ರದ್ದುಪಡಿಸಿ ಸದರಿ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಕಟ್ಟುನಿಟ್ಟಾದ ಕ್ರಮದೊಂದಿಗೆ ಮರುಪರೀಕ್ಷೆ ನಡೆಸಲು ಸೂಚಿಸಲಾಗಿರುತ್ತದೆ. |
| ಆ) | ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; ಪರೀಕ್ಷಾ ಅಕ್ರಮದಲ್ಲಿ ಭಾಗಿಯಾದ ಶಿಕ್ಷಣ ಸಂಸ್ಥೆಗಳ ಅನುಮತಿ ಹಿಂಪಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | 1. ನ್ಯೂಟ್ರಲ್ ಸೆಂಟರ್‌ಗಳು,<br>2. ಸಿ.ಸಿ.ಟಿವಿ ಮುಖಾಂತರ ಮೇಲ್ವಿಚಾರಣೆ<br>3. ಹೆಚ್ಚಿನ ಪೋಲಿಸ್ ಭದ್ರತೆ<br>4. ಎಲ್ಲಾ ವಿದ್ಯಾರ್ಥಿಗಳ ಪ್ರವೇಶ ಪತ್ರದಲ್ಲಿ ಕಡ್ಡಾಯವಾಗಿ ಹೆಸರು, ಭಾವಚಿತ್ರ ಹಾಗೂ ಪ್ರಾಂಶುಪಾಲರ ಸಹಿಯೊಂದಿಗೆ ಕೇಂದ್ರಗಳಲ್ಲಿ ಹಾಜರಾಗುವುದು.<br>5. ಕಡ್ಡಾಯವಾಗಿ ಆಧಾರ ಕಾರ್ಡ್‌ನೊಂದಿಗೆ ಪರೀಕ್ಷೆಗೆ ಹಾಜರಾಗಲು ಅನುಮತಿಸುವುದು.ಆಧಾರ ಕಾರ್ಡ್ ಇಲ್ಲದಿದ್ದ ಪಕ್ಷದಲ್ಲಿ ಇತರೆ ಸರ್ಕಾರಿ ಗುರುತಿನ ಚೀಟಿಗಳೊಂದಿಗೆ ಅವಕಾಶ ಕಲ್ಪಿಸುವುದು.<br><br>ಸಾಮೂಹಿಕ ನಕಲು ಹಾಗೂ ಸೂಕ್ತ ದಾಖಲೆಗಳಿಲ್ಲದೇ ಪರೀಕ್ಷೆ ಬರೆಯಲು ಅನುವು ಮಾಡಿಕೊಟ್ಟ ನರ್ಸಿಂಗ್ ಶಾಲೆಗಳ ಮತ್ತು ಪರೀಕ್ಷಾ ಕೇಂದ್ರಗಳ ಮೇಲೆ ಕೂಡಲೇ ನಿಯಮಾನುಸಾರ ಕ್ರಮ ಜರುಗಿಸುವಂತೆ ವಿಶೇಷಾಧಿಕಾರಿಗಳು, ಕರ್ನಾಟಕ ಶುಶ್ರೂಷಾ ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ (ನಿಯಂತ್ರಣ) ಪ್ರಾಧಿಕಾರ, ಬೆಂಗಳೂರು ಇವರಿಗೆ ಸೂಚಿಸಲಾಗಿರುತ್ತದೆ. |

ಸಂಖ್ಯೆ: ಎಂಇಡಿ 683 ಎಂಎಂಸಿ 2022

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು



Generated from eOffice by DR.K SUDHAKAR, MED-MIN(SK), MINISTER, MEDICAL EDUCATION SEC on 16/12/2022 06:36 PM